**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 162 ಟಿಇಸಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:09.09.2022

**ಇವರಿಂದ:-**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು-560001.

**ಇವರಿಗೆ:-**

ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,
ಜ್ಞಾನಸಂಗಮ, ಬೆಳಗಾವಿ.

ಮಾನ್ಯರೇ,

**ವಿಷಯ:** ಆರ್.ವಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ಸ್ನಾತಕ ಕೋರ್ಸನ್ನು ಪ್ರಾರಂಭಿಸಲು/ಹೆಚ್ಚಿಸಲು/ಕಡಿತಗೊಳಿಸಲು ಸಂಯೋಜನೆ ನೀಡುವ ಕುರಿತು.

**ಉಲ್ಲೇಖ:**
1. ಪ್ರಾಂಶುಪಾಲರು, ಆರ್.ವಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ರವರ ಪತ್ರ ಸಂಖ್ಯೆ: RVITM/ADM/010/2022-23 ದಿನಾಂಕ:23.06.2022.
2. ತಮ್ಮ ಪತ್ರ ಸಂಖ್ಯೆ: VTU/BGM/Aca/2022-23/413/1&413, ದಿನಾಂಕ:19.04.2022.

********

ಆರ್.ವಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಕಾಲೇಜಿನಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ B.E in Information Science and Engineering ಸ್ನಾತಕ ಕೋರ್ಸನ್ನು 60 ವಿದ್ಯಾರ್ಥಿ ಪ್ರಮಾಣದಿಂದ 90 ವಿದ್ಯಾರ್ಥಿ ಪ್ರಮಾಣಕ್ಕೆ ಹೆಚ್ಚಿಸಲು ಹಾಗೂ B.E in Mechanical Engineering ಸ್ನಾತಕ ಕೋರ್ಸನ್ನು 60 ವಿದ್ಯಾರ್ಥಿ ಪ್ರಮಾಣದಿಂದ 30 ವಿದ್ಯಾರ್ಥಿ ಪ್ರಮಾಣಕ್ಕೆ ಕಡಿತಗೊಳಿಸಲು ಸಂಯೋಜನೆ ಕೋರಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು ಸ್ಥಳೀಯ ವಿಚಾರಣಾ ಸಮಿತಿಯ, ಅಕಾಡೆಮಿಕ್ ಸೆನೆಟ್ ಮತ್ತು ಕಾರ್ಯಕಾರಿ ಮಂಡಳಿ ಶಿಫಾರಸ್ಸು ಹಾಗೂ ಎಐಸಿಟಿಇಯ ಅನುಮೋದನೆಯ ಹಿನ್ನಲೆಯಲ್ಲಿ ಸಂವೀಕ್ಷಿಸಲಾಗಿದೆ.

GoK file 10/11

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧಿನಿಯಮ 1994ರ ಪ್ರಕರಣ 40ರಲ್ಲಿ ನೀಡಿರುವ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಆರ್.ವಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಬೆಂಗಳೂರು ಈ ಸಂಸ್ಥೆಯಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ B.E in Information Science and Engineering ಸ್ನಾತಕ ಕೋರ್ಸನ್ನು 60 ವಿದ್ಯಾರ್ಥಿ ಪ್ರಮಾಣದಿಂದ 90 ವಿದ್ಯಾರ್ಥಿ ಪ್ರಮಾಣಕ್ಕೆ ಹೆಚ್ಚಿಸಲು ಹಾಗೂ B.E in Mechanical Engineering ಸ್ನಾತಕ ಕೋರ್ಸನ್ನು 60 ವಿದ್ಯಾರ್ಥಿ ಪ್ರಮಾಣದಿಂದ 30 ವಿದ್ಯಾರ್ಥಿ ಪ್ರಮಾಣಕ್ಕೆ ಕಡಿತಗೊಳಿಸಲು ಸಂಯೋಜನೆ ನೀಡುವ ಪ್ರಸ್ತಾವನೆಗೆ ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡದೆ ಎಂದು ತಮಗೆ ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

**ಷರತ್ತುಗಳು:-**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸುಗಳೆಂದು ಪರಿಗಣಿಸತಕ್ಕದ್ದು;
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
5. ಸ್ಥಳೀಯ ವಿಚಾರಣಾ ಸಮಿತಿ, ಎ.ಐ.ಸಿ.ಟಿ.ಇ ರವರು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ:13.08.1997 ರಂದು ವಿಶಾಖ ವಿರುದ್ಧ ರಾಜಸ್ಥಾನ ಸರ್ಕಾರ ಮೊಕದ್ದಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯ ಮೇಲೆ ಲೈಂಗಿಕ ಕಿರುಕುಳ ನೀಡಿದ್ದಲ್ಲಿ ಅದು ಸಂಜ್ಞೆಯ ಅಪರಾಧ (Cognizable offense) ಎಂದು

ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸ್‌ನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವರೆಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
13. ಇನ್ನು ಮುಂದೆ ಯಾವುದೇ ಹೊಸ ಕೋರ್ಸ್‌ನ್ನು ಪ್ರಾರಂಭಿಸಿದ್ದಲ್ಲಿ, ಇಲ್ಲವೇ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸಿಕೊಂಡಲ್ಲಿ, ಆಯಾಯ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರದಿಂದ ಸಂಯೋಜನೆಯ ಆದೇಶವನ್ನು ತಪ್ಪದೇ ಪಡೆಯತಕ್ಕದ್ದು.

ತಮ್ಮ ನಂಬುಗೆಯ

A.C. Madhu 9/9/22

(ಮಧು ಎ.ಸಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ).

9/9/22

**ಪ್ರತಿ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಪ್ರಾಂಶುಪಾಲರು, ಆರ್.ವಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್‌ಮೆಂಟ್, ಸೆಂಟ್.ನಂ.171/5, ಕೊತ್ತನೂರು, 8ನೇ ಹಂತ, ಜೆ.ಪಿ.ನಗರ, ಬೆಂಗಳೂರು-560 076.